

ಅರುಣ ಪಿ. ಭಟ್ಟ

## ವಾರಭವಿಷ್ಯ: 12.10.2023ರಿಂದ 18.10.2023ರವರೆಗೆ




ಹಣಕಾಸಿನ ಹರಿವು ಹೆಚ್ಚಿಸಿಕೊಳ್ಳಲು ಹೊಸ ಆಯ್ಕೆಗಳು ಗೋಚರವಾಗುತ್ತವೆ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡುವ ಸಾಧ್ಯತೆ ಇದೆ. ವೈಯಕ್ತಿಕ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆಗಳು ಕಾಣಿಸಿಕೊಳ್ಳುತ್ತವೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ವಾರಾಂತ್ಯಕ್ಕೆ ಶುಭ ಸುದ್ದಿ ಕೇಳಲಿದ್ದೀರಿ. ಶುಭದಿನ 18. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವೃತ್ತಿಪರರಿಗೆ ಉತ್ತಮವಾದ ಸಮಯ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವವರಿಗೆ ಯಶಸ್ಸು ದೊರೆಯಲಿದೆ. ಅಧಿಕಾರದಲ್ಲಿ ಇರುವವರು ನಿಮ್ಮ ಶ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಲಿದ್ದಾರೆ. ಪೋಷಕರು ನಿಮ್ಮ ಪ್ರಗತಿಯಿಂದಾಗಿ ಬಹಳ ಸಂತೋಷಪಡಲಿದ್ದಾರೆ. ದೀರ್ಘ ಕಾಲದಿಂದ ಇರುವ ಆರೋಗ್ಯ ಸಮಸ್ಯೆಗಳಿಂದ ಮುಕ್ತಿ ದೊರೆಯಲಿದೆ. ಶುಭದಿನ 13. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಉದ್ಯೋಗ ಹುಡುಕುತ್ತಿರುವವರಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಸಾಮಾಜಿಕ ಜೀವನದಲ್ಲಿ ಸಕ್ರಿಯರಾಗಿ ತೊಡಗಿಕೊಳ್ಳಲಿದ್ದೀರಿ. ಸೋದರ ಸೋದರಿಯರ ಜೊತೆಗೆ ಒತ್ತಡದ ಸನ್ನಿವೇಶಗಳನ್ನು ಎದುರಿಸಬೇಕಾಗುತ್ತದೆ. ಮನೆಯಲ್ಲಿ ಶುಭ ಕಾರ್ಯ ಆಯೋಜನೆ ಮಾಡಲಿದ್ದೀರಿ. ಮೇಲಧಿಕಾರಿಗಳಿಂದ ಮೆಚ್ಚುಗೆ ಕೇಳುವ ಯೋಗ ಇದೆ. ಶುಭದಿನ 14. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಕಾನೂನು ವ್ಯಾಜ್ಯಗಳಿದ್ದಲ್ಲಿ ಜಯ ಪಡೆಯುವ ಅವಕಾಶ ಇದೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಉದ್ಯೋಗ ಸ್ಥಳದಲ್ಲಿ ಬಹಳ ಮುಖ್ಯವಾದ ಜವಾಬ್ದಾರಿಯನ್ನು ನಿಮಗೆ ವಹಿಸಲಾಗುವುದು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿರುವವರಿಗೆ ಅವಧಿ ವಿಸ್ತರಣೆ ಆಗುವ ಸಾಧ್ಯತೆ ಇದೆ. ಶುಭದಿನ 16. ಕಾಲ ಭೈರವನ ಸೇವೆ ಮಾಡಿರಿ.




ಈ ವಾರ ಉಲ್ಲಾಸದಿಂದ ಸಮಯ ಕಳೆಯಲಿದೆ. ನಿಮ್ಮ ಶ್ರಮಕ್ಕೆ ಮೆಚ್ಚುಗೆ ವ್ಯಕ್ತವಾಗಲಿದೆ. ವೈವಾಹಿಕ ಜೀವನವು ಸಂತೋಷದಾಯಕವಾಗಿ ಇರುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ಇದರಿಂದ ಉತ್ಸಾಹ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಮುಖ್ಯವಾದ ಯೋಜನೆಯ ಮೇಲುಸ್ತುವಾರಿ ಸಲುವಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ 17. ಈಶ್ವರನಿಗೆ ತಿಲಾರ್ಚನೆ ಮಾಡಿರಿ.




ವಿದೇಶ ವ್ಯವಹಾರ, ಹಣಕಾಸು ಹೂಡಿಕೆಯಲ್ಲಿ ನಿರೀಕ್ಷಿತ ಯಶಸ್ಸು ಪಡೆಯಲಿದ್ದೀರಿ. ಪ್ರತಿಸ್ಪರ್ಧಿಗಳ ವಿರುದ್ಧ ಮೇಲುಗೈ ಸಾಧಿಸಲಿದ್ದೀರಿ. ಆರೋಗ್ಯದಲ್ಲಿ ಏರುಪೇರಾಗಲಿದೆ. ಆಹಾರ ಸೇವನೆಯ ಬಗ್ಗೆ ಎಚ್ಚರ ಇರಲಿ. ವಾರದ ಮಧ್ಯ ಭಾಗದಲ್ಲಿ ವೈಯಕ್ತಿಕ ಬದುಕಿಗೆ ಸಂಬಂಧಪಟ್ಟಂತೆ ಶುಭ ಸುದ್ದಿ ಕೇಳಲಿದ್ದೀರಿ. ಕಾನೂನು ವಿಚಾರಗಳಿಗೆ ಗಮನ ನೀಡಬೇಕಾಗುತ್ತದೆ. ಶುಭದಿನ 15. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವಿವಿಧ ಕ್ಷೇತ್ರಗಳಲ್ಲಿ ಪ್ರಗತಿ ಪಡೆಯಲಿದ್ದೀರಿ. ವೈಯಕ್ತಿಕ ಬದುಕು ಸಂತುಷ್ಟವಾಗಿರುತ್ತದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಪಡೆಯುವ ಯೋಗ ಇದೆ. ಆರ್ಥಿಕ ವ್ಯವಹಾರಗಳು ಲಾಭದಾಯಕವಾಗಲಿದೆ. ಯಾವುದೇ ವಿಚಾರದಲ್ಲಿ ವ್ಯವಹಾರ ಮಾಡುವಾಗ ಸೂಕ್ಷ್ಮವಾಗಿ ವರ್ತಿಸಿ. ಪ್ರತಿಷ್ಠಿತ ಸಂಸ್ಥೆಯೊಂದು ಮುಖ್ಯವಾದ ಒಪ್ಪಂದಕ್ಕೆ ಬರಲಿದೆ. ಶುಭದಿನ 14. ಲಿಂಗಾಷ್ಟಕ ಓದಿರಿ.




ವೈಯಕ್ತಿಕ ಬದುಕು ಉತ್ತಮವಾಗಲಿದೆ. ಶಿಕ್ಷಣ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ. ಗೃಹ ನಿರ್ಮಾಣ ವಿಚಾರದಲ್ಲಿ ಪ್ರಗತಿ ಆಗಲಿದೆ. ಮನೆಯ ಹಿರಿಯರು ಮೆಚ್ಚುಗೆ ಸೂಚಿಸಲಿದ್ದಾರೆ. ಹಣಕಾಸು ಹರಿವು ಹೆಚ್ಚಲಿದೆ. ಹಣ ಗಳಿಕೆಗೆ ಹಲವು ದಾರಿಗಳು ಗೋಚರಿಸಲಿವೆ. ವಾರದ ಮಧ್ಯ ಭಾಗದಲ್ಲಿ ಪ್ರೀತಿಪಾತ್ರರ ಜತೆಗೆ ಹೆಚ್ಚು ಸಮಯ ಕಳೆಯಲಿದ್ದೀರಿ. ಶುಭದಿನ 16. ಹನುಮಾನ್ ಚಾಲೀಸ್ ಓದಿರಿ.




ಮೆಚ್ಚುಗೆ, ಬಡ್ತಿ ದೊರೆಯುವ ಸಮಯ ಇದು. ಧಾರ್ಮಿಕ ಕಾರ್ಯ ಆಯೋಜನೆ ಮಾಡುವ ಸಾಧ್ಯತೆ ಇದೆ. ಕೆಲ ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡುವುದರಿಂದ ಚಿಂತೆಗೆ ಕಾರಣವಾಗುತ್ತದೆ. ವಾರದ ಮಧ್ಯ ಭಾಗದಲ್ಲಿ ಮನೆಯ ಚಟುವಟಿಕೆಗಳು ಬಿರುಸಾಗುತ್ತವೆ. ವಾರದ ಎರಡನೇ ಭಾಗದಲ್ಲಿ ಹಣಕಾಸಿನ ಹರಿವು ಉತ್ತಮವಾಗಿರುತ್ತದೆ. ಶುಭದಿನ 14. ನವದುರ್ಗಾ ಆರಾಧನೆ ಮಾಡಿರಿ.




ಪಿತ್ರಾರ್ಜಿತ ಆಸ್ತಿ ವ್ಯವಹಾರಗಳು ನೀವು ಅಂದುಕೊಂಡಂತೆ ನಡೆಯುತ್ತವೆ. ಕಾನೂನು ವ್ಯಾಜ್ಯಗಳಿದ್ದಲ್ಲಿ ಪರಿಹಾರ ದೊರೆಯಲಿದೆ. ವಾರದ ದ್ವಿತೀಯಾರ್ಧದಲ್ಲಿ ಹಲವು ರೀತಿಯಲ್ಲಿ ಅವಕಾಶಗಳು ನಿಮಗೆ ದೊರೆಯಲಿವೆ. ಧಾರ್ಮಿಕ ವಿಚಾರಗಳಿಗೆ ಹೆಚ್ಚು ಸಮಯವನ್ನು ಮೀಸಲಿಡಲಿದ್ದೀರಿ. ಬಡ್ತಿ ಸಿಗುವ ಸಾಧ್ಯತೆಗಳಿವೆ. ಶುಭದಿನ 18. ಚಂಡಿಪಾರಾಯಣ ಮಾಡಿರಿ.




ಮನೆಯಲ್ಲಿ ಪ್ರಶಾಂತವಾದ ವಾತಾವರಣ ಇರುತ್ತದೆ. ನಿಮ್ಮ ಕೌಶಲ ಹೆಚ್ಚಿಸಿಕೊಳ್ಳಲು ಹಲವು ಬಗೆಯಲ್ಲಿ ಅವಕಾಶಗಳು ದೊರೆಯಲಿವೆ. ಪ್ರೀತಿಪಾತ್ರರ ಜತೆಗೆ ಮನರಂಜನೆ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದೀರಿ. ನಿಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ಮಾಡಲಿದ್ದೀರಿ. ಉದ್ಯಮದ ವಿಚಾರವಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ 17. ಸೌಂದರ್ಯ ಲಹರಿ ಪಠಿಸಿರಿ.




ಕಾನೂನು ವ್ಯಾಜ್ಯಗಳಿದ್ದಲ್ಲಿ ನಿಮ್ಮ ಪರ ತೀರ್ಪು ಬರುವ ಸಾಧ್ಯತೆ ಇದೆ. ಮೇಲಧಿಕಾರಿಗಳಿಂದ ನಿರೀಕ್ಷಿತ ಮಟ್ಟದ ಪ್ರೋತ್ಸಾಹ, ಬೆಂಬಲ ದೊರೆಯಲಿದೆ. ಆರೋಗ್ಯದ ಬಗ್ಗೆ ನಿಯಮಿತವಾದ ಕಾಳಜಿ ತೆಗೆದುಕೊಳ್ಳುವುದು ಅತ್ಯಗತ್ಯ. ಉದ್ಯೋಗಸ್ಥರಿಗೆ ಹೊಸ ಜವಾಬ್ದಾರಿಗಳು ಹೆಗಲೇರಲಿವೆ. ಆರ್ಥಿಕ ವ್ಯವಹಾರಗಳು ಲಾಭದಾಯಕವಾಗಿ ಇರಲಿವೆ. ಶುಭದಿನ 16. ವಿಷ್ಣು ಸಹಸ್ರನಾಮ ಪಠಿಸಿರಿ.